# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ
## 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003

ಸಂಖ್ಯೆ: KSEAB/DPIE/A8(MIS)/5/2024-23543 ದಿನಾಂಕ:15.02.2024

**<u>ಸುತ್ತೋಲೆ</u>**

ವಿಷಯ: ಎಸ್ ಎಸ್ ಎಲ್ ಸಿ ಮತ್ತು ದ್ವಿತೀಯ ಪಿ ಯು ಪರೀಕ್ಷಾ ಕೇಂದ್ರಗಳಲ್ಲಿ ಅಳವಡಿಸಿರುವ ಸಿ ಸಿ ಕ್ಯಾಮರಾಗಳ ದುರಸ್ತಿಗೆ ಆಯಾ ಶಾಲೆ/ ಕಾಲೇಜುಗಳಲ್ಲಿ ಲಭ್ಯವಿರುವ ಅನುದಾನವನ್ನು ಬಳಕೆ ಮಾಡುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಏಕಕಡತ ಸಂಖ್ಯೆ: KSEAB/DPIE/A8(MIS)/5/2024-23543 ರ ಕಂಡಿಕೆ-06 ರಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬೆಂಗಳೂರು ರವರ ಆದೇಶದಂತೆ.

* * * * * *

ಮಾರ್ಚ್/ಏಪ್ರಿಲ್ 2024 ರಲ್ಲಿ ನಡೆಯುವ ಎಸ್ ಎಸ್ ಎಲ್ ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷಾ ಕೇಂದ್ರಗಳಲ್ಲಿ ಅಳವಡಿಸಿರುವ ಸಿ.ಸಿ.ಕ್ಯಾಮರಾಗಳು ಸುಸ್ಥಿತಿಯಲ್ಲಿರುವುದನ್ನು ದೃಢಪಡಿಸಿಕೊಳ್ಳಲು ಎಸ್.ಎಸ್.ಎಲ್.ಸಿ ಪರೀಕ್ಷಾ ಕೇಂದ್ರಗಳಿಗೆ ಸಂಬಂಧಿಸಿದಂತೆ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ದ್ವಿತೀಯ ಪಿಯು ಪರೀಕ್ಷಾ ಕೇಂದ್ರಗಳಿಗೆ ಸಂಬಂಧಿಸಿದಂತೆ ಆಯಾ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಗೆ ಆಯಾ ಜಿಲ್ಲಾ ಉಪನಿರ್ದೇಶಕರ ಮೂಲಕ ಸೂಚಿಸಲಾಗಿರುತ್ತದೆ.

ಈ ರೀತಿ ಪರೀಕ್ಷಿಸುವಾಗ ಸಿ.ಸಿ.ಕ್ಯಾಮರಾಗಳು ಸುಸ್ಥಿತಿಯಲ್ಲಿ ಇಲ್ಲದೇ ಇದ್ದ ಪಕ್ಷದಲ್ಲಿ ಅವುಗಳನ್ನು ದುರಸ್ಥಿಗೊಳಿಸಲು ತಗುಲುವ ವೆಚ್ಚವನ್ನು ಆಯಾ ಪರೀಕ್ಷಾ ಕೇಂದ್ರಗಳಿರುವ ಶಾಲೆ / ಕಾಲೇಜುಗಳಲ್ಲಿ ಲಭ್ಯವಿರುವ ಸಂಚಿತ ನಿಧಿಯಿಂದ ಭರಿಸುವಂತೆ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ರವರು ಉಲ್ಲೇಖಿತ ಕಡತದಲ್ಲಿ ಆದೇಶಿಸಿರುತ್ತಾರೆ. ಅದರಂತೆ ಕ್ರಮವಹಿಸಲು ಈ ಮೂಲಕ ತಿಳಿಸಿದೆ.

Manjushree

**ಎನ್.ಮಂಜುಶ್ರೀ., ಭಾ.ಆ.ಸೇ**
**ಅಧ್ಯಕ್ಷರು**

**<u>ರವರಿಗೆ:</u>**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಪದವಿ ಪೂರ್ವ), ಶಾಲಾ ಶಿಕ್ಷಣ ಇಲಾಖೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.

**<u>ಪ್ರತಿಯನ್ನು:</u>**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ರವರಿಗೆ ಮಾಹಿತಿಗಾಗಿ ಗೌರವ ಪೂರ್ವಕವಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.